Akashvani : Bangalore
Regional Bulletin In Kannada
30.05.2025 / 2.30 hrs
ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

<><*<><>*><>

೧. ಸಂವಿಧಾನ ವಿರೋಧಿ ಶಕ್ತಿಗಳ ಮೇಲೆ ಕ್ರಮ ಕೈಗೊಳ್ಳದಿದ್ದರೆ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ರಕ್ಷಣಾಧಿಕಾರಿಗಳ ಮೇಲೆ ಕ್ರಮ - ಮುಖ್ಯಮಂತ್ರಿ ಸಿದ್ದರಾಮಯ್ಯ

೨. ಮುಂದುವರೆದ ಧಾರಾಕಾರ ಮಳೆ ಕರಾವಳಿ ಮತ್ತು ಮಲೆನಾಡು ಜಿಲ್ಲೆಗಳು ತತ್ತರ - ಇಬ್ಬರು ಸಾವು

೩. ಕವಿ ಹಿರಿಯ ಸಾಹಿತಿ ಹೆಚ್.ಎಸ್. ವೆಂಕಟೇಶ್‌ಮೂರ್ತಿ ನಿಧನ - ಗಣ್ಯರಿಂದ ಸಂತಾಪ

೪. ಜೂನ್ ೨ರ ವರೆಗೆ ರಾಜ್ಯದಲ್ಲಿ ಭಾರೀ ಮಳೆಯಾಗುವ ಸಾಧ್ಯತೆ -ಹವಾಮಾನ ಇಲಾಖೆ ಎಚ್ಚರಿಕೆ

<><*<><>*><>

ಸಂವಿಧಾನದ ಆಶಯ ಮತ್ತು ಧ್ಯೇಯೋದ್ದೇಶಗಳಿಗೆ ಯಾರೂ ವಿರುದ್ಧವಾಗಿ ಕಾರ್ಯನಿರ್ವಹಿಸಬಾರದು. ಅಂತಹ ಶಕ್ತಿಗಳು ಬೆಳೆಯಲು ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು. ಇತ್ತೀಚಿನ ದಿನಗಳಲ್ಲಿ ಇಂತಹ ಶಕ್ತಿಗಳು ತಲೆ ಎತ್ತುತ್ತಿದ್ದು, ಅಂತಹ ಶಕ್ತಿಗಳನ್ನು ಮೊಳಕೆಯಲ್ಲೇ ಚಿವುಟಿ ಹಾಕಬೇಕು. ಅಂತಹ ವ್ಯಕ್ತಿಗಳೂ ಯಾರೇ ಆಗಿದ್ದರೂ, ಅವರನ್ನು ಮಟ್ಟ ಹಾಕುವುದು ಅಂತಹ ಶಕ್ತಿಗಳು ಬೆಳೆಯದಂತೆ ನೋಡಿಕೊಳ್ಳಬೇಕಾದುದು ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಜಿಲ್ಲಾ ರಕ್ಷಣಾಧಿಕಾರಿಗಳ ಜವಾಬ್ದಾರಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಅವರು ಬೆಂಗಳೂರಿನಲ್ಲಿಂದು ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಸಭೆಯನ್ನು ಉದ್ದೇಶಿಸಿ ಮಾತನಾಡಿ, ಸಂವಿಧಾನ ವಿರೋಧಿ, ಜನ ವಿರೋಧಿ ದುಷ್ಟ ಶಕ್ತಿಗಳ ವಿರುದ್ಧ ಕ್ರಮ ಕೈಗೊಳ್ಳದಿದ್ದರೆ ಜಿಲ್ಲಾಧಿಕಾರಿ ಮತ್ತು ಜಿಲ್ಲಾ ರಕ್ಷಣಾಧಿಕಾರಿಗಳ ವಿರುದ್ಧ ಕ್ರಮಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಎಚ್ಚರಿಕೆ ನೀಡಿದ್ದಾರೆ. ಅಧಿಕಾರಿಗಳು ವಲ್ಲಭಬಾಯಿ ಪಟೇಲ್ ಅವರ ಮಾತುಗಳನ್ನು ಅರ್ಥಮಾಡಿಕೊಂಡು ಸಂವಿಧಾನದ ಆಶಯಗಳಿಗೆ ವಿರುದ್ಧವಾಗಿ ಕೆಲಸ ಮಾಡುವವರ ವಿರುದ್ಧ ಮತ್ತು ಜನಪರ ಆಶಯಗಳಿಗೆ ಪೂರಕವಾಗಿ ಸ್ಪಂದಿಸಬೇಕು.

<><*<><>*><>

ವರುಣಾರ್ಭಟಕ್ಕೆ ಕರಾವಳಿ ಜಿಲ್ಲೆಗಳು ತತ್ತರಿಸಿವೆ. ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಜಡಿ ಮಳೆಗೆ ಜನಜೀವನ ಅಸ್ತವ್ಯಸ್ತಗೊಂಡಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ನಿನ್ನೆ ರಾತ್ರಿಯಿಂದ ಧಾರಾಕಾರ ಮಳೆಯಾಗುತ್ತಿದ್ದು ಎರಡು ಪ್ರಾಣ ಹಾನಿ ಸಂಭವಿಸಿದೆ. ಉಳ್ಳಾಲ ತಾಲೂಕಿನ ಮಂಜನಾಡಿ ಮೊಂಟೆಪದವು ಎಂಬಲ್ಲಿ ಮನೆಯೊಂದರ ಮೇಲೆ ಗುಡ್ಡ ಕುಸಿದು ಬಿದ್ದು ೫೮ ರ ಹರೆಯದ ಮಹಿಳೆ ಹಾಗೂ ಬೆಳ್ಮ ಎಂಬಲ್ಲಿ ತಡೆಗೋಡೆ ಕುಸಿದು ಮನೆಯ ಮೇಲೆ ಬಿದ್ದ ಪರಿಣಾಮ ೧೦ ರ ಹರೆಯದ ಬಾಲಕಿ ಸಾವನ್ನಪ್ಪಿದ ದಾರುಣ ಘಟನೆ ನಡೆದಿದೆ. ತೀವ್ರ ಮಳೆಯ ಹಿನ್ನೆಲೆಯಲ್ಲಿ ದಕ್ಷಿಣ ಕನ್ನಡ ಜಿಲ್ಲೆಯ ಎಲ್ಲಾ ಅಂಗನವಾಡಿ ಮತ್ತು ಪ್ರಾಥಮಿಕ, ಪ್ರೌಢ ಶಾಲೆಗಳಿಗೆ ಇಂದು ರಜೆ ಘೋಷಿಸಲಾಗಿದೆ.

ಭಾರೀ ಮಳೆಯ ಪರಿಣಾಮ ಉಳ್ಳಾಲ ತಾಲೂಕಿನಾದ್ಯಂತ ನೂರಕ್ಕೂ ಹೆಚ್ಚು ಮನೆಗಳು ಜಲಾವೃತಗೊಂಡಿದ್ದು, ಉಳ್ಳಾಲ, ಕಲ್ಲಾಪು, ಬಗಂಬಿಲ, ಪಿಲಾರ್, ಅಂಬಿಕಾರಸ್ತೆ, ಕೋಟೆಕಾರು, ತಲಪಾಡಿ, ಪಾವೂರು, ಹರೇಕಳ, ಉಳಿಯ ಪ್ರದೇಶಗಳು ಜಲಾವೃತಗೊಂಡಿವೆ.

ಮಂಗಳೂರು ನಗರದ ತೋಟ ಬೆಂಗ್ರೆಯ ಅಳಿವೆ ಬಾಗಿಲು ಸಮೀಪ ನಾಡದೋಣಿ ಮಗುಚಿದ ಪರಿಣಾಮ ಇಬ್ಬರು ಮೀನುಗಾರರು ನಾಪತ್ತೆಯಾಗಿದ್ದಾರೆ. ಕಣ್ಮರೆಯಾದವರಿಗಾಗಿ ಶೋಧ ಕಾರ್ಯ ಮುಂದುವರಿದಿದೆ.

ನಿರಂತರ ಮಳೆಯಿಂದಾಗಿ ನಗರದ ಹೊರವಲಯದ ಜೋಕಟ್ಟೆ ಪಂಚಾಯತ್ ಮುಂಭಾಗದ ಗುಡ್ಡ ಕುಸಿದು ಮನೆಯೊಂದು ಕುಸಿದು ಬೀಳುವ ಹಂತದಲ್ಲಿದೆ. ಜಿಲ್ಲೆಯಲ್ಲಿ ಭಾರೀ ಮಳೆಯಾಗುತ್ತಿರುವ ಕಾರಣ ಜನತೆ ಮುಂಜಾಗ್ರತೆ ವಹಿಸಬೇಕು. ಪ್ರಾಕೃತಿಕ ವಿಕೋಪ ಸಂಭವಿಸುವ ಸ್ಥಳಗಳಿಗೆ ಅಧಿಕಾರಿಗಳು ಖುದ್ದು ತೆರಳಿ ಅಗತ್ಯಕ್ರಮಗಳನ್ನು ಕೈಗೊಳ್ಳುವಂತೆ ವಿಧಾನ ಸಭಾ ಅಧ್ಯಕ್ಷ ಯು.ಟಿ.ಖಾದರ್ ಸ್ಪಷ್ಟ ಸೂಚನೆ ನೀಡಿದ್ದಾರೆ. ಮಳೆ ಜೋರಾಗಿರುವುದರಿಂದ ಸಾರ್ವಜನಿಕರು ನದಿ, ತೊರೆ ಮತ್ತು ಕಡಲತೀರದತ್ತ ತೆರಳದಂತೆ ಜಿಲ್ಲಾಡಳಿತ ಎಚ್ಚರಿಕೆ ನೀಡಿದೆ.

ಉಡುಪಿ : ಜಿಲ್ಲೆಯಾದ್ಯಂತ ಹೆಚ್ಚಿನ ಮಳೆ ಆಗುತ್ತಿರುವ ಹಿನ್ನೆಲೆ ಉಡುಪಿ ಜಿಲ್ಲೆಯಾದ್ಯಂತ ಅಂಗನವಾಡಿ ಹಾಗೂ ಒಂದರಿಂದ ಹತ್ತನೇ ತರಗತಿವರೆಗೆ ಇಂದು ರಜೆ ಘೋಷಿಸಿ ಜಿಲ್ಲಾಧಿಕಾರಿ ವಿದ್ಯಾ

ಕುಮಾರಿ.ಕೆ ರವರು ಆದೇಶಿಸಿದ್ದಾರೆ. ಹಾಗೂ ಎಸ್ .ಎಸ್. ಎಲ್ .ಸಿ ಪೂರಕ ಪರೀಕ್ಷೆಯು ಎಂದಿನಂತೆ ನಡೆಯಲಿದೆ ಎಂದು ಜಿಲ್ಲಾಧಿಕಾರಿ ತಿಳಿಸಿದ್ದಾರೆ.

ಕೊಡಗು ಜಿಲ್ಲೆಯಲ್ಲಿ ಕಳೆದೊಂದು ವಾರದಿಂದ ಸುರಿಯುತ್ತಿದ್ದ ಮಳೆ ಇಂದು ಸ್ವಲ್ಪ ಬಿಡುವು ನೀಡಿದೆ. ಮಡಿಕೇರಿ ಸೇರಿದಂತೆ ಜಿಲ್ಲೆಯ ಬಹುತೇಕ ಕಡೆ ಇಂದು ಬೆಳಗ್ಗಿನಿಂದಲೇ ಮಳೆ ಬಿಡುವು ನೀಡಿದೆ. ಉತ್ತಮ ಮಳೆಯಿಂದಾಗಿ ಹಾರಂಗಿ ಜಲಾಶಯಕ್ಕೆ ಗಣನೀಯ ಪ್ರಮಾಣದಲ್ಲಿ ನೀರಿನ ಹರಿವಿದೆ. ಪ್ರಸ್ತುತ ಹಾರಂಗಿ ಜಲಾಶಯಕ್ಕೆ ೭ ಸಾವಿರ ಕ್ಯೂಸೆಕ್ ಗಳಷ್ಟು ನೀರಿನ  ಒಳಹರಿವಿದೆ. ೨೮೫೯ ಅಡಿ ಸಂಗ್ರಹಣಾ ಸಾಮರ್ಥ್ಯದ ಹಾರಂಗಿಯಲ್ಲಿ ಇಂದು ೨೮೪೭ ಅಡಿಗಳಷ್ಟು ನೀರು ಸಂಗ್ರಹವಿದೆ. ಚಿಕ್ಕಮಗಳೂರು ಜಿಲ್ಲೆಯ ಮಳೆಯಿಂದ ಹಾನಿಗೊಳಗಾದ ಕೆಲ ಪ್ರದೇಶಗಳಿಗೆ ಇಂದು ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳ್ಳಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಮೂಡಿಗೆರೆ, ಶೃಂಗೇರಿ ತಾಲೂಕುಗಳಲ್ಲಿ ಪ್ರವಾಸ ಕೈಗೊಂಡಿರುವ ಅವರು ಈ ಭಾರಿ ಮಳೆಯಿಂದ ಹಾನಿಗೊಳಗಾದ ಮೂಡಿಗೆರೆ ಸಾರಗೋಡು, ಕುಂದೂರು, ಅಲ್ದೂರು ರಸ್ತೆಗಳು, ಸೇತುವೆಗಳನ್ನು ಪರಿಶೀಲಿಸಿದರು. ಈ ವೇಳೆ ಚಿಕ್ಕಮಗಳೂರು ಶಾಸಕ ಹೆಚ್.ಡಿ ತಮಯ್ಯ, ಮೂಡಿಗೆರೆ ಶಾಸಕಿ ನಯನ ಮೋಟಮ್ಮ, ಶೃಂಗೇರಿ ಶಾಸಕ ಟಿ.ಡಿ ರಾಜೇಗೌಡ ಹಾಗೂ ಅಧಿಕಾರಿಗಳು ಹಾಜರಿದ್ದರು.

<><*<><>*><>

ಕವಿ, ಹಿರಿಯ ಸಾಹಿತಿ ಹೆಚ್.ಎಸ್.ವೆಂಕಟೇಶ್ ಮೂರ್ತಿಯವರು ಇಂದು ಬೆಳಗ್ಗೆ ನಿಧನರಾಗಿದ್ದಾರೆ. ಅವರಿಗೆ ೮೧ ವರ್ಷ ವಯಸ್ಸಾಗಿತ್ತು. ಅವರು ಕವಿತೆ, ನಾಟಕ, ಪ್ರಬಂಧ, ಕಾದಂಬರಿ, ಮಕ್ಕಳ ಸಾಹಿತ್ಯ, ಅನುವಾದ, ವಿಮರ್ಶೆ, ಹಳೆಗನ್ನಡ ಸಾಹಿತ್ಯ, ಹೀಗೆ ಹಲವು ಕ್ಷೇತ್ರಗಳಲ್ಲಿ ಕೆಲಸ ಮಾಡಿದ್ದಾರೆ.

ಅವರಿಗೆ, ಕನ್ನಡದಲ್ಲಿ ಕಥನ ಕವನಗಳು, ಮಹಾಪ್ರಬಂಧಕ್ಕೆ ಪಿಹೆಚ್‌ಡಿ ಪದವಿ ದೊರೆತಿದೆ. ಅವರು, ೮೫ನೇ ಕನ್ನಡ ಸಾಹಿತ್ಯ ಸಮ್ಮೇಳನದ ಅಧ್ಯಕ್ಷರಾಗಿದ್ದರು. ಬೆಂಗಳೂರಿನ ಸೇಂಟ್ ಜೋಸೆಫ್ ವಾಣಿಜ್ಯ ಕಾಲೇಜಿನಲ್ಲಿ ಕನ್ನಡ ಸಂಘ ಕಟ್ಟಿ ಹಲವರಿಗೆ ಬರೆಯಲು ಪ್ರೇರಣೆ ನೀಡಿದ್ದಾರೆ.

ಪರಿವೃತ್ತ ಬಾಗಿಲು ಬಡೆಯುವ ಜನರು ಸೌಗಂಧಿಕ ಮೊದಲಾದವು ಅವರ ಪ್ರಮುಖ ಕವನ ಸಂಕಲನಗಳು. ಅವರು ಕಾಳಿದಾಸನ ಋತು ಸಂಹಾರವನ್ನು ಋತು ವಿಲಾಸ ಹೆಸರಿನಲ್ಲಿ ಅನುವಾದಿಸಿದ್ದಾರೆ.

ಅವರ ಹೆಚ್ಚಿನ ಕವಿತೆಗಳು ಕ್ಯಾಸೆಟ್‌ನಲ್ಲಿ ಬಂದು ದಾಖಲೆ ನಿರ್ಮಿಸಿವೆ. ಅವರು ಸಾಹಿತ್ಯ ಪ್ರಾಕಾರಗಳಲ್ಲದೇ ಕೆಲವೊಂದು ಧಾರಾವಾಹಿಗಳಿಗೂ ಶೀರ್ಷಿಕೆ ಗೀತೆ ರಚಿಸಿದ್ದರು.

ಅವರ ನಿಧನಕ್ಕೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ ಕೆ ಶಿವಕುಮಾರ್ ಸೇರಿದಂತೆ ವಿವಿಧ ಕ್ಷೇತ್ರದ ಹಲವು ಗಣ್ಯರು ಸಂತಾಪ ಸೂಚಿಸಿದ್ದಾರೆ.

<><*<><>*><>

ಇಂದು ಕರಾವಳಿ ಜಿಲ್ಲೆಗಳಲ್ಲಿ ವ್ಯಾಪಕ ಮಳೆಯಾಗುತ್ತಿದ್ದು, ಉತ್ತರ ಹಾಗೂ ದಕ್ಷಿಣ ಒಳನಾಡಿನಲ್ಲಿ ಹಲವು ಕಡೆ ಮಳೆಯಾಗಿದ್ದು, ಉತ್ತರ ಕನ್ನಡ, ಉಡುಪಿ, ದಕ್ಷಿಣ ಕನ್ನಡ ಜಿಲ್ಲೆಗಳ ಕೆಲವೆಡೆ ಇಂದು ವ್ಯಾಪಕ ಮಳೆಯಾಗುವ ಸಾಧ್ಯತೆಯಿದೆ. ಈ ಪ್ರದೇಶಗಳಿಗೆ ಆರೆಂಜ್ ಅಲರ್ಟ್ ನೀಡಲಾಗಿದೆ.

ರಾಜ್ಯದಲ್ಲಿ ಜೂನ್ ೨ರ ವರೆಗೂ ಭಾರೀ ಮಳೆಯಾಗುವ ಸಾಧ್ಯತೆಯಿದೆ ಎಂದು ಮುನ್ಸೂಚನೆಯಿರುವ ಹಿನ್ನೆಲೆ ಮುಂಜಾಗ್ರತಾ ಕ್ರಮವಾಗಿ ದಕ್ಷಿಣ ಕನ್ನಡ, ಉಡುಪಿ, ಚಿಕ್ಕಮಗಳೂರು, ಹಾಸನ, ಕೊಡಗು ಜಿಲ್ಲೆಗಳಿಗೆ ರೆಡ್ ಅಲರ್ಟ್ ನೀಡಲಾಗಿದೆ. ಶಿವಮೊಗ್ಗ, ಮೈಸೂರು, ಕಲಬುರಗಿ, ಬೀದರ್ ಜಿಲ್ಲೆಗಳಿಗೆ ಯೆಲ್ಲೋ ಅಲರ್ಟ್ ಹಾಗೂ ಉತ್ತರ ಕನ್ನಡ ಜಿಲ್ಲೆಗೆ ಆರೆಂಜ್ ಅಲರ್ಟ್ ಘೋಷಣೆ ಮಾಡಲಾಗಿದೆ. ಬೆಂಗಳೂರಿನಲ್ಲಿ ಹಗುರದಿಂದ ಸಾಧಾರಣ ಮಳೆ ಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆಯ ನಿರ್ದೇಶಕರು ಡಾ. ಸಿ.ಎಸ್. ಪಾಟೀಲ್ ತಿಳಿಸಿದ್ದಾರೆ.

<><*<><>*><>

ಪ್ರಸಾರ ಭಾರತಿಯ ಶಬ್ದ್ ಪೋರ್ಟಲ್‌ನ ಉಚಿತ ಸೇವೆಗಳಿಗೆ ನೋಂದಾಯಿಸಿಕೊಳ್ಳಲು ಯೂಟ್ಯೂಬರ್‌ಗಳು, ಪಾಡ್‌ಕ್ಯಾಸ್ಟರ್‌ಗಳು ಮತ್ತು ವೀಡಿಯೊ ಸಂಪಾದಕರನ್ನು ಆಹ್ವಾನಿಸಲಾಗಿದೆ.

ಪ್ರಸಾರ ಭಾರತಿ ಶಬ್ದ್ ಹಕ್ಕುಸ್ವಾಮ್ಯ - ಮುಕ್ತ, ಅಧಿಕೃತ ಮತ್ತು ಬಳಸಲು ಸುರಕ್ಷಿತ ವಿಷಯಕ್ಕಾಗಿ ಒಂದು ಸುಲಭ ಮೂಲವಾಗಿದೆ. ಪ್ರಸಾರ ಭಾರತಿ ಶಬ್ದ್ ೧,೫೦೦ ಕ್ಕೂ ಹೆಚ್ಚು ವರದಿಗಾರರ ದೃಢವಾದ ಜಾಲವನ್ನು ಹೊಂದಿದೆ, ಸಮಗ್ರ ಪ್ರಸಾರವನ್ನು ಒದಗಿಸಲು ೨೪ ಗಂಟೆ  ಕಾರ್ಯನಿರ್ವಹಿಸುವ ೬೦ ಮೀಸಲಾದ ಸಂಪಾದಕರಿಂದ ಕೂಡಿದೆ.

<><*<><>*><>

ಸರ್ಕಾರಿ ಆಸ್ಪತ್ರೆ ಆವರಣಗಳಲ್ಲಿರುವ ಜನೌಷಧಿ ಕೇಂದ್ರಗಳನ್ನು ಮುಚ್ಚುವ ರಾಜ್ಯ ಸರ್ಕಾರದ ಆದೇಶ ವಿರೋಧಿಸಿ ದಾವಣಗೆರೆ ಜಿಲ್ಲಾ ಬಿಜೆಪಿ ಕಾರ್ಯಕರ್ತರು ಜಿಲ್ಲಾ ಸರ್ಕಾರಿ ಆಸ್ಪತ್ರೆ ಎದುರು ಇಂದು ಮೌನ ಪ್ರತಿಭಟನೆ ನಡೆಸಿದರು.

ಮಾಜಿ ಶಾಸಕ ಬಸವರಾಜ್ ನಾಯ್ಕ ಮಾತನಾಡಿ, ಜನರಿಗೆ ಕಡಿಮೆ ದರದಲ್ಲಿ ಉತ್ತಮ ಗುಣಮಟ್ಟದ ಔಷಧಿ ಮತ್ತು ವೈದ್ಯಕೀಯ ಪರಿಕರ ನೀಡುವ ಉದ್ದೇಶದಿಂದ ಕೇಂದ್ರ ಸರ್ಕಾರ ಜಾರಿಗೆ ತಂದಿದ್ದ ಜನೌಷಧಿ ಕೇಂದ್ರಗಳನ್ನು ಸರ್ಕಾರಿ ಆಸ್ಪತ್ರೆ ಆವರಣದಿಂದ ತೆರೆವುಗೊಳಿಸುವ ರಾಜ್ಯ ಸರ್ಕಾರದ ನಿರ್ಧಾರ ದುರುದ್ದೇಶಪೂರಕವಾಗಿದೆ ಎಂದರು.

ರಾಜ್ಯ ಸರ್ಕಾರ ಕೂಡಲೇ ತನ್ನ ಆದೇಶವನ್ನು ಹಿಂಪಡೆದು ಬಡ ಮತ್ತು ಮಧ್ಯಮ ಕುಟುಂಬಗಳ ಪರವಾಗಿ ನಿಲ್ಲಬೇಕೆಂದು ಅವರು ಆಗ್ರಹಿಸಿದರು.

<><*<><>*><>

ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ರಾಗಿಗೂ ಬೆಂಬಲ ಬೆಲೆ ಹೆಚ್ಚಿಸಿರುವುದು ಕೋಲಾರ ಜಿಲ್ಲೆಯ ರೈತರಿಗೆ ವರದಾನವಾಗಲಿದೆ ಎಂದು ಕರ್ನಾಟಕ ಮಾವು ಮಂಡಳಿ ಮಾಜಿ ಅಧ್ಯಕ್ಷ ವಾಸುದೇವ ತಿಳಿಸಿದರು.

<><*<><>*><>